# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎ.ಪಿ. ಶಿವಕುಮಾರ್, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ನರಗುಂದ, ಇವರ ಲೋಕಾಯುಕ್ತ ಟ್ರಾಪ ಪ್ರಕರಣದ ಕುರಿತು.

**ಓದಲಾಗಿದೆ;-**

1) ಡೆಪ್ಯುಟಿ ರಿಜಿಸ್ಟ್ರಾರ ವಿಚಾರಣೆ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅರೆ ಸರ್ಕಾರಿ ಪತ್ರ ಸಂ. ಕಂಪ್ಲೆಂಟ್/ಉಪಲೋಕ್/ಬಿಜಿಎಂ-359/2009, ದಿನಾಂಕ: 07-10-2011.

**ಪ್ರಸ್ತಾವನೆ:-**

ಮೇಲೆ ಓದಲಾದ ದಿನಾಂಕ: 07-10-2011ರ ಪತ್ರದಲ್ಲಿ, ಅಪರ ನಿಬಂಧಕರು, ವಿಚಾರಣೆ-1, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರು ಶೀ ಎ.ಪಿ. ಶಿವಕುಮಾರ್, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ನರಗುಂದ ಗದಗ ಜಿಲ್ಲೆ ಇವರ ವಿರುದ್ದ, ಶ್ರೀ ಪ್ರಕಾಶ ಚಂದ್ರಗೌಡ ಪಾಟೀಲ್, ಬದಾಮಿ ಇವರು ಕರ್ನಾಟಕ ಲೋಕಾಯುಕ್ತ ಅಧಿ ನಿಯಮ 1984ರಡಿ ಸಲ್ಲಿಸಿದ ದೂರಿನನ್ವಯ ಮಾನ್ಯ ಉಪ ಲೋಕಾಯುಕ್ತ ಕರ್ನಾಟಕ ರಾಜ್ಯ ಬೆಂಗಳೂರು, ಇವರು ತನಿಖೆ ನಡೆಸಿ, ನಿಯಮ 12(3)ರಡಿ ಸಲ್ಲಿಸಿದ ತನಿಖಾ ವರದಿಯನ್ನು ಸೂಕ್ತ ಕ್ರಮಕ್ಕಾಗಿ, ಕಳುಹಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರು, ತಮ್ಮ ತನಿಖಾ ವರದಿಯಲ್ಲಿ ಶೀ ಎ.ಪಿ. ಶಿವಕುಮಾರ್, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ನರಗುಂದ ಗದಗ ಜಿಲ್ಲೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಸರ್ಕಾರದ ಕೆಲಸ ನಿಮಿತ್ತ ತಿಂಗಳ ಬಾಡಿಗೆ ಆಧಾರದ ಮೇಲೆ ಟಾಟಾ ಇಂಡಿಕಾ ಕಾರನ್ನು ಪಡೆದುಕೊಂಡಿದ್ದು, ಸದರಿ ಕಾರಿನ ಬಾಡಿಗೆ ಹಣ ಬಿಡುಗಡೆ ಮಾಡಲು ತಮ್ಮ ಸ್ಥಾನ ದುರುಪಯೋಗಪಡಿಸಿಕೊಂಡು, ಕಾರಿನ ವಾಹನ ಚಾಲಕರಿಂದ ರೂ. 2000/- ಲಂಚ ಪಡೆಯುತ್ತಿದ್ದಾಗ, ಲೋಕಾಯುಕ್ತ ಬಲೆಗೆ ಸಿಕ್ಕಿ ಬಿದ್ದ ಪ್ರಯುಕ್ತ ಅವರ ವಿರುದ್ದ ಲಂಚ ನಿರೋಧಕ ಕಾಯ್ದೆ 1988ರ ಕಲಂ 7,13,(1) ಸಹ ಕಲಂ 13 (2) ಪಿ.ಸಿ. ರಡಿ ಗದಗ ಲೋಕಾಯುಕ್ತ ಪೋಲಿಸ ಠಾಣೆ, ಗುನ್ನೆ ಸಂಖ್ಯೆ: 1/2008ರಲ್ಲಿ ಪ್ರಕರಣ ದಾಖಲಾಗಿದೆಯೆಂದು ವರದಿ ಮಾಡಿರುತ್ತಾರೆ. ಮತ್ತು ಸದರಿ ಅಧಿಕಾರಿಯವರು ಫಿರ್ಯಾಧಿದಾರರಿಂದ ಅಕ್ರಮವಾಗಿ ಸಂಭಾವನೆ ಪಡೆಯುವ ಬಗ್ಗೆ ಪಂಚನಾಮಾ ಮಾಡಲಾಗಿದೆಯೆಂದು, ಹಾಗೂ ಶ್ರೀ ಎ.ಪಿ. ಶಿವಕುಮಾರ್, ಸಹಾಯಕ ಕೃಷಿ ನಿರ್ದೇಶಕರನ್ನು ರಾಸಾಯನಿಕ ಪರೀಕ್ಷೆಗೆ ಒಳಪಡಿಸಲಾಗಿದೆಯೆಂದು ವರದಿ ಮಾಡಿ, ಸದರಿ ಅಧಿಕಾರಿಯವರು ಎಸಗಿರುವ ಮೇಲ್ಕಂಡ ಆರೋಪ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966ರ ನಿಯಮ-3(1)ರ ಪ್ರಕಾರ ಸರ್ಕಾರಿ ನೌಕರರಿಗೆ ಸಲ್ಲದ ದುರ್ವರ್ತನೆಯಾಗಿರುತ್ತದೆ. ಆದ್ದರಿಂದ ಸದರಿ ಅಧಿಕಾರಿಯವರು ಎಸಗಿರುವ ಮೇಲ್ಕಂಡ ಆರೋಪಕ್ಕೆ ಸಂಬಂಧಿಸಿದಂತೆ ಅವರನ್ನು ಶಿಸ್ತು ಕ್ರಮಕ್ಕೆ ಗುರಿಪಡಿಸಲು ಸದರಿ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ)ನಿಯಮಾವಳಿ 1957ರ ನಿಯಮ -14(ಎ)ರನ್ವಯ ಪ್ರಕರಣವನ್ನು ಮುಂದಿನ ತನಿಖೆಗಾಗಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರ ಶ್ರೀ ಎ.ಪಿ. ಶಿವಕುಮಾರ್ ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ನರಗುಂದ ಗದಗ ಜಿಲ್ಲೆ ಇವರ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ಅವರನ್ನು ಶಿಸ್ತು ಕ್ರಮಕ್ಕೆ ಗುರಿಪಡಿಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃತೋಇ 19 ಕೃಪವಿ 2008**

**ಬೆಂಗಳೂರು, ದಿನಾಂಕ: 20ನೇ ಡಿಸೆಂಬರ್ 2011**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಎ.ಪಿ. ಶಿವಕುಮಾರ್ ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ನರಗುಂದ, ಗದಗ, ಜಿಲ್ಲೆ ಇವರನ್ನು, ಅವರು ಎಸಗಿರುವ ದುರ್ವರ್ತನೆಗೆ ಸಂಬಂಧಿಸಿದಂತೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ-11ರಡಿಯಲ್ಲಿ ಶಿಸ್ತು ಕ್ರಮಕ್ಕೆ ಗುರಿಪಡಿಸಲು ಅದೇ ನಿಯಮಾವಳಿ ನಿಯಮ 14(ಎ)ರಡಿಯಲ್ಲಿ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

20/12/11
(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.
20/12

ಇವರಿಗೆ:-

1) ಮಹಾಲೇಖಪಾಲರು, (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪ ಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4) ಜಂಟಿ ಕೃಷಿ ನಿರ್ದೇಶಕರು, ಚಿಕ್ಕಮಗಳೂರು/ಗದಗ
5) ಸಹಾಯಕ ಕೃಷಿ ನಿರ್ದೇಶಕರು, ಶೃಂಗೇರಿ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.
6) ಸಂಬಂಧಪಟ್ಟ ಅಧಿಕಾರಿಯವರಿಗೆ (ಕೃಷಿ ಆಯುಕ್ತರ ಮೂಲಕ)
7) ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
8) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
9) ಸರ್ಕಾರದ ಜಂಟಿ ಕಾರ್ಯದರ್ಶಿ, ಕೃಷಿ ಇಲಾಖೆ, ಅವರ ಆಪ್ತ ಸಹಾಯಕರಿಗೆ.
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.